ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 21 ಸಚಿವ ಸಂಪುಟ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 19/11/20

# ಮರಾಠ ಪ್ರಾಧಿಕಾರ ಬದಲಾಗಿ ನಿಗಮ

## ಕನ್ನಡಿಗರ ವಿರೋಧಕ್ಕೆ ಮಣಿದ ರಾಜ್ಯ ಸರ್ಕಾರ ಹಳೆ ಆದೇಶ ರದ್ದು: 50 ಕೋಟಿ ನೆರವು ಡೌಟು

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದಲ್ಲಿಮರಾಠಅಭಿವೃದ್ಧಿಪ್ರಾಧಿಕಾರ ರಚನೆಗೆ ವ್ಯಾಪಕ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಪ್ರಾಧಿಕಾರ ರಚಿಸುವ ನಿರ್ಧಾರದಿಂದ ಹಿಂದೆ ಸರಿದಿರುವ ರಾಜ್ಯ ಸರ್ಕಾರವು ಮರಾಠ ಸಮುದಾಯ ನಿಗಮ ರಚಿಸಲು ನಿರ್ಧರಿಸಿದೆ. ಬುಧವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಸಮುದಾಯಕ್ಕೆ ಸೀಮಿತವಾದ ನಿಗಮ ಸ್ಥಾಪಿಸಲು ಸರ್ಕಾರ ನಿರ್ಧರಿಸಿದೆ. ➘9

### ಬಂದ್ ಮಾಡಿದ್ರೆ ಕಠಿಣ ಕ್ರಮ

**ಮರಾಠರು ಕರ್ನಾಟಕದಲ್ಲೇ ಇರುವವರು ಮತ್ತು ಹಿಂದುತ್ವವಾದಿಗಳು. ಅವರ ಅಭಿವೃದ್ಧಿಗಾಗಿ ನಿಗಮ ಸ್ಥಾಪಿಸುತ್ತಿದ್ದೇವೆ. ಕನ್ನಡ ಸಂಘಟನೆಗಳು ಅರ್ಥ ಮಾಡಿಕೊಂಡು ಬಂದ್ ನಿರ್ಧಾರ ಕೈಬಿಡಬೇಕು. ಬಲವಂತವಾಗಿ ಬಂದ್ ಮಾಡಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು.**

• **ಯಡಿಯೂರಪ್ಪ** ಮುಖ್ಯಮಂತ್ರಿ

# ಮರಾಠ ಪ್ರಾಧಿಕಾರ ಬದಲಾಗಿ ನಿಗಮ

➚ ಮೊದಲ ಪುಟದಿಂದ

ಪ್ರಾಧಿಕಾರ ರಚನೆಗೆ ನ.13ರಂದು ಆದೇಶ ಹೊರಡಿಸಿದ್ದ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ರಾಜ್ಯದಲ್ಲಿ ಮರಾಠ ಜನಾಂಗದವರು ಹೆಚ್ಚಿನ ಸಂಖ್ಯೆಯಲ್ಲಿ ಇರುವುದರಿಂದ ಈ ಸಮಾಜದ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಹಾಗೂ ಧಾರ್ಮಿಕ ಅಭಿವೃದ್ಧಿಗಾಗಿ 'ಮರಾಠ ಅಭಿವೃದ್ಧಿ ಪ್ರಾಧಿಕಾರ' ಸ್ಥಾಪಿಸಬೇಕು ಹಾಗೂ 50 ಕೋಟಿರು. ಅನುದಾನಮೀಸಲಿಡಬೇಕು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ನಿರ್ದೇಶಿಸಿದ್ದರು.

ಈ ಆದೇಶ ಹೊರಬಿದ್ದ ಬೆನ್ನಲ್ಲೇ. ರಾಜ್ಯದಲ್ಲಿ ಮರಾಠ ಅಭಿವೃದ್ಧಿ ಪ್ರಾಧಿಕಾರ ರಚನೆಗೆ ಕನ್ನಡ ಪರ ಸಂಘಟನೆಗಳು ಸೇರಿದಂತೆ ವಿವಿಧ ಸಂಘಟನೆಗಳು ಹಾಗೂ ವಿರೋಧ ಪಕ್ಷಗಳು ಆಕ್ರೋಶ ವ್ಯಕ್ತಪಡಿಸಿದ್ದವು. ಅಲ್ಲದೆ ವಿವಿಧ ಸಂಘಟನೆಗಳು ಡಿಸೆಂಬರ್ 5ರಂದು ರಾಜ್ಯ ಬಂದ್‌ಗೆ ಕರೆ ನೀಡಿದ್ದವು. ಇದರಿಂದ ಎಚ್ಚೆತ್ತುಕೊಂಡ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಬುಧವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಮರಾಠ ಅಭಿವೃದ್ಧಿ ಪ್ರಾಧಿಕಾರದ ಬದಲಿಗೆ 'ಮರಾಠ ಸಮುದಾಯ ನಿಗಮ' ರಚಿಸಲು ನಿರ್ಧರಿಸಿದ್ದಾರೆ. ಈ ಮೂಲಕ ವಿವಾದಕ್ಕೆ ತೆರೆ ಎಳೆಯಲು ಪ್ರಯತ್ನಿಸಿದ್ದಾರೆ.

ಈ ಬಗ್ಗೆ ಮಾಹಿತಿ ನೀಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಮಾಧುಸ್ವಾಮಿ, ಮರಾಠ ಅಭಿವೃದ್ಧಿ ಪ್ರಾಧಿಕಾರದ ಹೆಸರು ಬದಲಿಸಿ ಮರಾಠ ಸಮುದಾಯ ನಿಗಮ ರಚನೆ ಮಾಡಲು ಸಚಿವ ಸಂಪುಟ ಸಭೆಯಲ್ಲಿಅನುಮೋದನೆನೀಡಲಾಗಿದೆ. ರಾಜ್ಯ ಸರ್ಕಾರವು ಪ್ರಾಧಿಕಾರ ರಚನೆ ಮಾಡಬೇಕಾದರೆ ಪ್ರತ್ಯೇಕ ಕಾನೂನು ಮಾಡಬೇಕು. ಆದರೆ ನಿಗಮ ಮಾಡಲು ರಾಜ್ಯ ಸರ್ಕಾರವೇ ತೀರ್ಮಾನ ಮಾಡಬಹುದು. ಹೀಗಾಗಿಪ್ರಾಧಿಕಾರದ ಬದಲು ನಿಗಮ ರಚನೆಗೆ ತೀರ್ಮಾನಿಸಲಾಗಿದೆ. ನಿಗಮಕ್ಕೆ ಎಷ್ಟು ಹಣ ಮೀಸಲಿಡಬೇಕು ಎಂಬ ಬಗ್ಗೆ ಇನ್ನೂ ಚರ್ಚೆಯಾಗಿಲ್ಲ ಎಂದರು.

ಈ ಬಗ್ಗೆ ಉಂಟಾಗಿದ್ದ ವಿವಾದದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಒಂದು ಸಮುದಾಯದ ಅಭಿವೃದ್ಧಿಗೆ ಏಕೆ ವಿರೋಧ ವ್ಯಕ್ತಪಡಿಸುತ್ತಿದ್ದಾರೋ ಗೊತ್ತಿಲ್ಲ. ಮರಾಠ ಸಮುದಾಯದವರ ಅಭಿವೃದ್ಧಿಗಾಗಿ ನಿಗಮ ಮಾಡುತ್ತಿದ್ದೇವೆಯೇ ಹೊರತು ಮರಾಠಿ ಭಾಷಿಕರಿಗೆ ಅಲ್ಲ. ರಾಜ್ಯದಲ್ಲಿರುವ ಮರಾಠ ಸಮುದಾಯದ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ ಎಂದು ಸ್ಪಷ್ಟಪಡಿಸಿದರು.

### ಪ್ರಾಧಿಕಾರಕ್ಕೂ ನಿಗಮಕ್ಕೂ ವ್ಯತ್ಯಾಸವೇನು?

ಪ್ರಾಧಿಕಾರ ಸ್ಥಾಪಿಸಲು ಹೊಸತಾಗಿ ಕಾಯ್ದೆ ರೂಪಿಸಬೇಕು. ಆದರೆ, ನಿಗಮ ಸ್ಥಾಪಿಸಲು ಸರ್ಕಾರವೇ ನಿರ್ಧಾರ ಕೈಗೊಳ್ಳಬಹುದು. ಹೀಗಾಗಿ ಮರಾಠ ಸಮುದಾಯಕ್ಕೆ ಸೀಮಿತವಾಗಿ ನಿಗಮ ಸ್ಥಾಪಿಸಲು ನಿರ್ಧರಿಸಲಾಗಿದೆ ಎಂದು ಸರ್ಕಾರ ಹೇಳಿಕೊಂಡಿದೆ.